**ಕರ್ನಾಟಕ ಸರ್ಕಾರ**

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ 18ನೇ ಅಡ್ಡರಸ್ತೆ, ಬೆಂಗಳೂರು

ಪಪೂಶಿ/ಸಿ-2/ಮೈವಿ/ಎಲ್‌ಎಲ್/ಅಗೈಹಾ-77/2011-12.

ದಿನಾಂಕ:26-12-14

## ಅನಧಿಕೃತ ಗೈರುಹಾಜರಿ ಬಗ್ಗೆ ತಿಳುವಳಿಕೆ ಪತ್ರ

(ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 28(ಎ)ರಂತೆ

ಹಾಸನ ಜಿಲ್ಲೆಯ ಅರಕಲಗೂಡಿನಲ್ಲಿರುವ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಮಲ್ಲೇಗೌಡ ಆದ ನೀವು ದಿನಾಂಕ 24-8-2006ರಿಂದ ಕಾಲೇಜಿನ ಕರ್ತವ್ಯಕ್ಕೆ ಹಾಜರಾಗದೆ ಗೈರುಹಾಜರಾಗಿ ಕಾಲೇಜಿನ ದೈನಂದಿನ ಕೆಲಸಗಳಿಗೆ ಮತ್ತು ಪಾಠಪ್ರವಚನಗಳಿಗೆ ತೊಂದರೆಯನ್ನುಂಟುಮಾಡುತ್ತಿರುವ ಹಿನ್ನೆಲೆಯಲ್ಲಿ ತಮ್ಮ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ನಿಯಮಗಳನ್ವಯ ಇಲಾಖಾ ವಿಚಾರಣೆಯನ್ನು ನಡೆಸಲು ಪ್ರಾಧಿಕಾರವು ತೀರ್ಮಾನಿಸಿ ತಮಗೆ ಕಾರಣ ಕೇಳಿ ನೋಟೀಸ್ ನೀಡಲಾಗಿರುತ್ತದೆ. ಆದರೆ, ಸದರಿ ನೋಟೀಸ್ಸನ್ನು ತಮಗೆ ಜಾರಿ ಮಾಡಲು ನಡೆಸಲಾದ ಎಲ್ಲಾ ಪ್ರಯತ್ನಗಳು ವಿಫಲಾವಾಗಿರುವುದರಿಂದ ಪತ್ರಿಕಾ ಪ್ರಕಟಣೆಯನ್ನು ನೀಡಲಾಗಿರುತ್ತದೆ.

ಈ ಪತ್ರಿಕಾ ಪ್ರಕರಣೆಯಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳ ಒಳಗೆ ತಾವು ತಮ್ಮ ಕಾಲೇಜಿನ ಪ್ರಿನ್ಸಿಪಲ್ ರವರ ಎದುರು ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಂಡು ಜಾರಿ ಮಾಡಲಾಗಿರುವ ಕಾರಣ ಕೇಳಿ ನೋಟೀಸ್ಸನ್ನು ಪಡೆದುಕೊಂಡು ತಮ್ಮ ಹೇಳಿಕೆಗಳನ್ನು ಲಿಖಿತ ರೂಪದಲ್ಲಿ ನೀಡುವುದು. ಗೊತ್ತುಪಡಿಸಲಾದ ದಿನದಲ್ಲಿ ತಮ್ಮಿಂದ ಯಾವುದೇ ಉತ್ತರ ಬಾರದಿದ್ದಲ್ಲಿ ನೀವು ಹೇಳುವುದು ಏನೂ ಇಲ್ಲವೆಂದು ಭಾವಿಸಿ ಲಭ್ಯವಿರುವ ಧಾಖಲೆಗಳ ಆಧಾರದ ಮೇಲೆ ನಿಯಮಗಳನ್ವಯ ಏಕಪಕ್ಷೀಯ ನಿರ್ಣಯವನ್ನು ತೆಗೆದುಕೊಳ್ಳಲಾಗುವುದು.

ಸಹಿ:
ಶಿಸ್ತು ಪ್ರಾಧಿಕಾರಿ ಹಾಗೂ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

೩